**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ - 838/2019**
**ಚಾಸಾ - 07 / ಪ್ರಾಸಾ - 03**

| | |
|---|---|
| ಹೆಸರು | **ಆಂಜನೇಯ** |
| ತಂದೆಯ ಹೆಸರು | **ಲೇಟ್ ಸಂಜೀವಯ್ಯ** |
| ವಯಸ್ಸು | **54** |
| ಉದ್ಯೋಗ | **ಕೂಲಿ ಕೆಲಸ** |
| ವಿಳಾಸ | **ತಿಪ್ಪಗೊಂಡನಹಳ್ಳಿ** |

**ದಿನಾಂಕಃ 25-01-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ - ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ -**

ಈಗ ಸಾಕ್ಷಿಗೆ ನಿಪಿ-2 ನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸುಮಾರು 8 ರಿಂದ 9 ವರ್ಷಗಳ ಹಿಂದೆ ನಾನು ನಿಪಿ-2 ಕ್ಕೆ ಪೋ. ಠಾಣೆಯಲ್ಲಿ ನನ್ನ ಸಹಿಯನ್ನು ಮಾಡಿರುತ್ತೇನೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೋಲೀಸರು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ನನ್ನನ್ನು ಹೊರತುಪಡಿಸಿ ಬೇರೆ ಯಾರೂ ನಿಪಿ-2 ಕ್ಕೆ ಸಹಿಯನ್ನು ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ**

ನೀಡಲಾಯಿತು.

**ಪಾಟೀ ಸವಾಲು- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ-**

ದಿ.04-05-2015 ರಂದು ಬೆಳಗ್ಗೆ 11 ರಿಂದ 12.30 ರ ಸಮಯದಲ್ಲಿ ಚಾಸಾ-1 ರವರು ತೋರಿಸಿದ ಜಾಗದಲ್ಲಿ ಪೋಲೀಸರು ನಿಪಿ-2 ರಂತೆ ಪಂಚನಾಮೆಯನ್ನು ಮಾಡಿ ನಿಮ್ಮ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಆ ಸಮಯದಲ್ಲಿ 1 ನೇ ಆರೋಪಿ ಮತ್ತು ಇತರರು ಯಾವುದೇ ಪರವಾನಿಗೆ ಇಲ್ಲದೇ, ಯಾರು ಅನುಮತಿಯನ್ನು ಪಡೆಯದೇ, ವಾಸದ ಮನೆಗಳನ್ನು 5 ರಿಂದ 6 ಅಡಿ ಅಂತರದಲ್ಲಿ ಇದ್ದರೂ ಸಹ ಅದರಿಂದ ಅಪಾಯ ಆಗುತ್ತದೆ ಎಂದು ಗೊತ್ತಿದ್ದರೂ ಸಹ ಕಂಪ್ರೆಸರ್ ಮುಖೇನ ಕಲ್ಲು ಬಂಡೆಗಳನ್ನು ಸುಮಾರು 2 ರಿಂದ 3 ಅಡಿಗಳಷ್ಟು ತೂತನ್ನು ಕೊರೆಸಿ, ಸದರಿ ತೂತುಗಳಿಗೆ ರಾಸಾಯನಿಕ ವಸ್ತುಗಳನ್ನು ಹಳೆಯ ಬಟ್ಟೆ ಹಾಗೂ ಬತ್ತಿಗಳನ್ನು ತುಂಬಿ ಬತ್ತಿಗೆ ಬೆಂಕಿಯನ್ನು ಹಚ್ಚಿ ಬ್ಲಾಸ್ಟ್ ಮಾಡುತ್ತಿದ್ದರು ಎಂಬ ವಿಷಯವನ್ನು ಪೋಲೀಸರು ನಿಮಗೆ ತಿಳಿಸಿ ನಿಪಿ-2 ಕ್ಕೆ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಆ ಸಮಯದಲ್ಲಿ ಪೋಲೀಸರು ರಾಸಾಯನಿಕ ಮತ್ತು ಇತರೇ ವಸ್ತುಗಳನ್ನು ಬಿಳಿಯ ಬಟ್ಟೆಯಿಂದ ತುಂಬಿಸಿ, ಆರ್ಟಿಕಲ್-1 ರಿಂದ 4 ಎಂದು ಗುರುತಿಸಿ " ಎ " ಎಂದು ಸೀಲ್ ನ್ನು ಹಾಕಿದ್ದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆ ಮಾಡುವ ಸಮಯದಲ್ಲಿ ಚಾಸಾ1 ಮತ್ತು ಪ್ರಾಸಾ-2 ಮತ್ತು ನೀವು ಹಾಜರಿದ್ದು ನಿಮ್ಮ ಸಹಿಯನ್ನು ನಿಪಿ-2 ಕ್ಕೆ ಹಾಕಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪೋಲೀಸರು ಅಮಾನತ್ತು ಪಡಿಸಿಕೊಂಡಿರುವ ವಸ್ತುಗಳ ಚೀಲದ ಮೇಲೆ ನಿಮ್ಮ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು -ಆರೋಪಿಗಳ ಪರ ಶ್ರೀ. ಎಂ. ಎಂ , ವಕೀಲರಿಂದ-**

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**

**ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -**
**ಚಾಸಾ - 01 / ಪ್ರಾಸಾ - 01**

| | |
|---|---|
| ಹೆಸರು | |
| ತಂದೆಯ / ಗಂಡನ ಹೆಸರು | |
| ವಯಸ್ಸು | |
| ಉದ್ಯೋಗ | ವ್ಯವಸಾಯ |
| ವಿಳಾಸ | |

ದಿನಾಂಕಃ **11-01-2024** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ - ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ -**

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**
**ಪಾಟೀ ಸವಾಲು- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

**ಪಾಟೀ ಸವಾಲು - ಆರೋಪಿ ಪರ ಶ್ರೀ.** ವಕೀಲರಿಂದ ಃ-

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಮರು ವಿಚಾರಣೆ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**